**ಮಾನ್ಯ ವಿಧಾನ ಪರಿಷತ್ತಿನ ಸದಸ್ಯರಾದ ಶ್ರೀ ಪ್ರಕಾಶ ಬಾಬಣ್ಣ ಹುಕ್ಕೇರಿ ರವರು ಶೂನ್ಯ ವೇಳೆಯಲ್ಲಿ ಪ್ರಸ್ತಾಪಿಸಿರುವ ಸೂಚನೆಗೆ ಸರ್ಕಾರದ ಹೇಳಿಕೆ**

**ಸೂಚನೆ**

ಬೆಳಗಾವಿ ಜಿಲ್ಲೆಯು ವಿಸ್ತೀರ್ಣದಲ್ಲಿ ರಾಜ್ಯದಲ್ಲೇ 2ನೇ ಸ್ಥಾನವನ್ನು ಹೊಂದಿದ್ದು, ಜನಸಂಖ್ಯೆಯು 2023 ಕ್ಕೆ ಅಂದಾಜು 55 ಲಕ್ಷಕ್ಕೂ ಅತ್ಯಧಿಕವಾಗಿರುತ್ತದೆ. ಜಿಲ್ಲೆಯಲ್ಲಿ ಒಟ್ಟು 15 ತಾಲ್ಲೂಕುಗಳು, 18 ವಿಧಾನಸಭಾ ಕ್ಷೇತ್ರಗಳು, 2 ಲೋಕಸಭಾ ಕ್ಷೇತ್ರಗಳು ಹಾಗೂ 2 ವಿಧಾನಸಭಾ ಕ್ಷೇತ್ರಗಳು ಉತ್ತರ ಕನ್ನಡ ಲೋಕಸಭಾ ವ್ಯಾಪ್ತಿಗೆ ಒಳಪಡುತ್ತವೆ. ಅಲ್ಲದೇ 4 ವಿಧಾನ ಪರಿಷತ್ತು ಕ್ಷೇತ್ರಗಳು ಬೆಳಗಾವಿ ಜಿಲ್ಲೆ ಪ್ರತಿನಿಧಿಸುತ್ತವೆ. ಬೆಳಗಾವಿ ಜಿಲ್ಲಾ ಕೇಂದ್ರದಿಂದ ಅಥಣಿ ತಾಲ್ಲೂಕಿನ ಕೊನೆಯ ಹಳ್ಳಿಯವರು ಜಿಲ್ಲಾ ಮಟ್ಟದ ಕಛೇರಿಗಳಿಗೆ ತಮ್ಮ ದೈನಂದಿನ ಕೆಲಸಗಳಿಗಾಗಿ ಸುಮಾರು 190 ಕಿ.ಮೀ ಗಳಿಂದ ಪ್ರಯಾಣಿಸಬೇಕಾಗುತ್ತದೆ. ಕಾರಣ ಸಾರ್ವಜನಿಕ ಮತ್ತು ಆಡಳಿತಾತ್ಮಕ ಹಿತದೃಷ್ಟಿಯಿಂದ ಬೆಳಗಾವಿ ಜಿಲ್ಲೆಯನ್ನು ವಿಭಜಿಸಿ ಚಿಕ್ಕೋಡಿ ಜಿಲ್ಲೆಯೆಂದು ಘೋಷಣೆ ಮಾಡುವ ವಿಷಯವು ಸಾರ್ವಜನಿಕ ಅತೀ ಮುಖ್ಯವಾದ ವಿಷಯವಾಗಿದ್ದು, ಸನ್ಮಾನ್ಯರು ಈ ವಿಷಯವನ್ನು ಶೂನ್ಯ ವೇಳೆಯಲ್ಲಿ ಪ್ರಸ್ತಾಪಿಸಲು ಅನುಮತಿ ನೀಡಬೇಕೆಂದು ಕೋರುತ್ತೇನೆ.

**ಹೇಳಿಕೆ:**

ಬೆಳಗಾವಿ ಜಿಲ್ಲೆಯನ್ನು ವಿಭಜಿಸಿ ಚಿಕ್ಕೋಡಿಯನ್ನು ಹೊಸ ಜಿಲ್ಲೆಯನ್ನಾಗಿ ಘೋಷಿಸಲು ಸರ್ಕಾರದಲ್ಲಿ ಕೋರಿಕೆ ಸ್ವೀಕೃತವಾಗಿರುತ್ತದೆ. ಸದರಿ ಕೋರಿಕೆಯನ್ನು ಸೂಕ್ತ ಪರಿಶೀಲನೆಯ ಸಲುವಾಗಿ ಸಂಬಂಧಪಟ್ಟ ಪ್ರಾದೇಶಿಕ ಆಯುಕ್ತರಿಗೆ ಕಳುಹಿಸಲಾಗಿರುತ್ತದೆ.

ಮುಂದುವರಿದು, ಹೊಸದಾಗಿ ಜಿಲ್ಲೆಗಳನ್ನು ರಚಿಸಲು ನಿರ್ದಿಷ್ಟ ಮಾನದಂಡಗಳನ್ನು ರೂಪಿಸಿರುವುದಿಲ್ಲ. ಯಾವುದೇ ಒಂದು ಪ್ರದೇಶ/ತಾಲ್ಲೂಕನ್ನು ಜಿಲ್ಲೆಯನ್ನಾಗಿ ರಚಿಸುವ ಸಂದರ್ಭದಲ್ಲಿ ಅಲ್ಲಿನ ಭೌಗೋಳಿಕ ಹಿನ್ನೆಲೆ, ಜನಸಂಖ್ಯೆ, ಹಿಂದುಳಿದಿರುವಿಕೆ, ಹೊಸ ಜಿಲ್ಲೆಯ ರಚನೆಯಿಂದಾಗುವ ಅನುಕೂಲ, ಸಾರ್ವಜನಿಕ ಆಶೋತ್ತರಗಳಿಗೆ ಸ್ಪಂದನೆ, ತಾಲ್ಲೂಕು ಕೇಂದ್ರ ಮತ್ತು ಜಿಲ್ಲಾ ಕೇಂದ್ರಗಳಿಗಿರುವ ದೂರ ಸೇರಿದಂತೆ ಸಾರ್ವಜನಿಕ ಹಿತಾಸಕ್ತಿ ಮತ್ತು ಆಡಳಿತಾತ್ಮಕ ಅಂಶಗಳನ್ನು ಪರಾಮರ್ಶಿಸಲಾಗುತ್ತದೆ.

ಇದರ ಜೊತೆಗೆ, ನೂತನ ಜಿಲ್ಲೆಗಳನ್ನು ರಚಿಸುವ ವಿಷಯವು ಸರ್ಕಾರದ ಸಾಮಾನ್ಯ ನೀತಿಗೆ ಸಂಬಂಧಿಸಿದ್ದಾಗಿದೆ. ನೂತನ ಜಿಲ್ಲೆಯನ್ನಾಗಿ ರಚಿಸಬೇಕಾದರೆ ಭೌಗೋಳಿಕ ಮತ್ತು ಆಡಳಿತಾತ್ಮಕ ಅಗತ್ಯತೆಗಳ ಜೊತೆಗೆ ರಾಜ್ಯದ ಆರ್ಥಿಕ ಪರಿಸ್ಥಿತಿಯನ್ನು ಸಹ ಅವಲಂಬಿಸಿದ್ದು, ಸಂಪನ್ಮೂಲಗಳ ಕ್ರೋಢೀಕರಣ ಮತ್ತು ಹಣಕಾಸಿನ ಇತಿಮಿತಿಗಳನ್ನು ಒಳಗೊಂಡಿರುತ್ತದೆ. ಸರ್ಕಾರವು ಪ್ರಸ್ತುತ ಹೊಸ ಜಿಲ್ಲೆಗಳ ರಚನೆಗೆ ಯಾವುದೇ ತಾತ್ವಿಕ ನಿರ್ಣಯ ಕೈಗೊಂಡಿರುವುದಿಲ್ಲ.

**ಸಂಖ್ಯೆ: ಕಂಇ 86 ಎಲ್‌ಆರ್‌ಡಿ 2023**

**(ಕೃಷ್ಣ ಬೈರೇಗೌಡ)**
ಕಂದಾಯ ಸಚಿವರು